**1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿಃ 1681/2018**

| | | | |
|---|---|---|---|
| ಸಾಕ್ಷಿದಾರರ ಹೆಸರು | | **ರಮೇಶ** | ಪ್ರಾಸಾಃ 2 |
| ತಂದೆಯ/ಗಂಡನ ಹೆಸರು | | ರಂಗಸ್ವಾಮಿ | ಚಾಸಾಃ 4 |
| ವಯಸ್ಸು | | 27 ವರ್ಷ | |
| ಕೆಲಸ | | ಗಾರೆ ಕೆಲಸ | ಸಾ ಪ್ರ ಬೋ |
| ವಾಸ | | ದೊಡ್ಡಕವಲಂದೆ ಗ್ರಾಮ | ದಿಃ 17/01/2024 |

**ಮುಖ್ಯ ವಿಚಾರಣೆ ಪ್ರಾಜ್ಞ ಸ.ಸ.ಅ ರವರಿಂದಃ**

ಸಾಕ್ಷಿಗೆ ಒಂದು ದಾಖಲಾತಿ ತೋರಿಸಿದ್ದು ಅದು ಸ್ಥಳ ಪಂಚನಾಮೆ ಯಾಗಿದ್ದು, ಸ್ಥಳ ಪಂಚನಾಮೆ ಯಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದರಿಂದ ಸ್ಥಳ ಪಂಚನಾಮೆ ಯನ್ನು ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ನಿಪಿ-2 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ಸುಮಾರು 5 ವರ್ಷಗಳ ಹಿಂದೆ ಪೊಲೀಸರು ದೊಡ್ಡಕವಲಂದೆಯಲ್ಲಿ ನಾನು ಗಾರೆ ಕೆಲಸ ಮಾಡುತ್ತಿದ್ದಾಗ ಬಂದು ನಿಪಿ-2 ಕ್ಕೆ ನನ್ನ ಸಹಿ ಪಡೆದಿರುತ್ತಾರೆ. ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಪ್ರಾಜ್ಞ ಸ.ಸ.ಅ ರವರಿಂದಃ**

ದಿನಾಂಕ 27.07.2018 ರಂದು ಚಾಸಾ-1 ರವರು ಕೃತ್ಯ ನಡೆದ ಸ್ಥಳವನ್ನು ಪೊಲೀಸರಿಗೆ ತೋರಿಸಿದ ಮೇರೆಗೆ ಅವರುಗಳು ನನ್ನ ಹಾಗು ಚಾಸಾ-5 ರವರ ಸಮಕ್ಷಮ ಆರೋಪಿತರು ಚಾಸಾ-1 ರವರ ಜಮೀನಿಗೆ ಅತಿಕ್ರಮ ಪ್ರವೇಶ ಮಾಡಿ ಕಾಂಪೋಂಡ್ ಗೋಡೆಯನ್ನು ಬೀಳಿಸಿದ್ದ ವಿಚಾರವಾಗಿ ಚಾಸಾ-1 ರವರ ದೊಡ್ಡಕವಲಂದೆ ಗ್ರಾಮದ ಸರ್ವೆ ನಂಬರ್ 2/1 ರಲ್ಲಿನ 2 ಎಕರೆ 32 ಗುಂಟೆ ಯಲ್ಲಿರುವ ಬಾಳೆ ತೋಟದ ಮುಂಭಾಗ ಬೆಳಗ್ಗೆ 10.30 ರಿಂದ 11.30 ರವರೆಗೆ ನಿಪಿ-2 ರಂತೆ ಪಂಚನಾಮೆ ಜರುಗಿಸಿರುತ್ತಾರೆ ಎಂದರೆ

ಸರಿಯಲ್ಲ. ಈ ಮೇಲಿನ ಎಲ್ಲಾ ವಿಚಾರಗಳು ಗೊತ್ತಿದ್ದರೂ ಕೂಡ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು:** ಆರೋಪಿ ಪರ ವಕೀಲರಿಂದ ಇಲ್ಲ ಎಂದು ತಿಳಿಸಿರುತ್ತಾರೆ.

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ ಹೇ ಕೇ ಸ ಇದೆ ಎಂ ಒ**

ಸಹಿ/-

**1ನೇ ಹೆಚ್ಚುವರಿ ಸಿ.ಜೆ ಮತ್ತು ಪ್ರದನ್ಯಾದಂ**

**ನಂಜನಗೂಡು**